ಕರ್ನಾಟಕ ಸರ್ಕಾರ

ಸಂಖ್ಯೆ: ಕಂಇ 158 ಟಿಎನ್‌ಆರ್ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:01-03-2021.

## ಆದೇಶ

1. ಭಾರತ ಸರ್ಕಾರದ ಕೇಂದ್ರ ಗೃಹ ಮಂತ್ರಾಲಯವು ಆದೇಶ ಸಂಖ್ಯೆ:40-3/2020-ಡಿಎಂ-I(ಎ), ದಿನಾಂಕ:27.01.2021ರಲ್ಲಿ ದೇಶಾದ್ಯಂತ ಕೋವಿಡ್-19 ಸೋಂಕು ನಿಗಾವಣೆ, ನಿಯಂತ್ರಣ ಮತ್ತು ಜಾಗ್ರತೆಗೆ ಸಂಬಂಧಿಸಿದಂತೆ ಮಾರ್ಗಸೂಚಿಗಳನ್ನು ದಿನಾಂಕ:28.02.2021ರವರೆಗೆ ಜಾರಿಯಲ್ಲಿರುವಂತೆ ಹೊರಡಿಸಿದೆ. ಅದರನ್ವಯ, ರಾಜ್ಯ ಸರ್ಕಾರವು ಆದೇಶ ಸಂಖ್ಯೆ: ಕಂಇ 158 ಟಿಎನ್‌ಆರ್ 2020, ದಿನಾಂಕ:28.01.2021ರಲ್ಲಿ ಕೋವಿಡ್-19 ವೈರಾಣು ಸೋಂಕು ನಿಗಾವಣೆ, ನಿಯಂತ್ರಣ ಮತ್ತು ಜಾಗ್ರತೆಗೆ ಸಂಬಂಧಿಸಿದಂತೆ ಮಾರ್ಗಸೂಚಿಗಳನ್ನು ದಿನಾಂಕ:28.02.2021ರವರೆಗೆ ಜಾರಿಯಲ್ಲಿರುವಂತೆ ಹೊರಡಿಸಿತ್ತು.

2. ಭಾರತ ಸರ್ಕಾರದ ಗೃಹ ಮಂತ್ರಾಲಯವು ಪ್ರಸ್ತುತ ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ನಿರ್ದೇಶನದ ಮೇರೆಗೆ ಆದೇಶ ಸಂಖ್ಯೆ:40-3/2020-ಡಿಎಂ-I(ಎ), ದಿನಾಂಕ:26.02.2021ರಲ್ಲಿ ಕೋವಿಡ್-19 ಸೋಂಕು ನಿಗಾವಣೆ, ನಿಯಂತ್ರಣ ಮತ್ತು ಜಾಗ್ರತೆಗೆ ಸಂಬಂಧಿಸಿದ ದಿನಾಂಕ:27.01.2021ರ ಆದೇಶ/ಮಾರ್ಗಸೂಚಿಗಳನ್ನು ದಿನಾಂಕ:31.03.2021ರವರೆಗೆ ಜಾರಿಯಲ್ಲಿರುವಂತೆ ವಿಸ್ತರಿಸಿದೆ.

3. ಆದ್ದರಿಂದ, ವಿಪತ್ತು ನಿರ್ವಹಣಾ ಅಧಿನಿಯಮ, 2005ರ ಸೆಕ್ಷನ್ (24)ರ ಅಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ರಾಜ್ಯ ಕಾರ್ಯಕಾರಿ ಸಮಿತಿಯ ಅಧ್ಯಕ್ಷನಾಗಿ ಈ ಕೆಳಗೆ ಸಹಿ ಮಾಡಿರುವ ನಾನು ಅನುಬಂಧದಲ್ಲಿರುವಂತೆ ಕೋವಿಡ್-19 ವೈರಾಣು ಸೋಂಕು ನಿಗಾವಣೆ, ನಿಯಂತ್ರಣ ಮತ್ತು ಜಾಗ್ರತೆಗೆ ಸಂಬಂಧಿಸಿದ ದಿನಾಂಕ:28.01.2021ರ ಆದೇಶದಲ್ಲಿನ ಮಾರ್ಗಸೂಚಿಗಳನ್ನು ದಿನಾಂಕ:01.03.2021 ರಿಂದ ದಿನಾಂಕ:31.03.2021ರವರೆಗೆ ವಿಸ್ತರಿಸಿ ಆದೇಶಿಸಿರುತ್ತೇನೆ. ಈ ಆದೇಶವನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರು, ಪೊಲೀಸ್ ಆಯುಕ್ತರು, ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಪೊಲೀಸ್ ವರಿಷ್ಠಾಧಿಕಾರಿಗಳು, ಇಲಾಖಾ ಮುಖ್ಯಸ್ಥರುಗಳು ಮತ್ತು ಪ್ರಾಧಿಕಾರಗಳು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸತಕ್ಕದ್ದು.

(ಪಿ. ರವಿ ಕುಮಾರ್)
ಮುಖ್ಯ ಕಾರ್ಯದರ್ಶಿ ಹಾಗೂ
ರಾಜ್ಯ ಕಾರ್ಯಕಾರಿ ಸಮಿತಿ ಅಧ್ಯಕ್ಷರು

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು.

## GOVERNMENT OF KARNATAKA

No. RD 158 TNR 2020

Karnataka Government Secretariat,
Vidhana Soudha,
Bengaluru, dated:01-03-2021

## ORDER

**Whereas,** the Ministry of Home Affairs, Govt. of India, vide Order No.40-3/2020-DM-I(A) dated 27-01-2021 has issued guidelines for surveillance, containment and caution of COVID-19 in the Country which will be in force upto 28.02.2021. Consequently, the State Government issued guidelines for surveillance, containment and caution of COVID-19 in the State vide Order of even number dated 28.01.2021.

**Now,** the Ministry of Home Affairs, Govt. of India, vide Order No.40-3/2020-DM-I(A) dated 26-02-2021 has further extended the existing guidelines for surveillance, containment and caution of COVID-19 in the Country until 31.03.2021.

**Therefore,** in exercise of the powers, conferred under the Section 24 of the Disaster Management Act, 2005, the undersigned, in the capacity of the Chairman, State Executive Committee, hereby directs that the guidelines for surveillance, containment and caution of COVID-19 for the State issued vide Order of even number dated 28.01.2021, **will remain in force including and upto 31.03.2021,** for strict implementation by Commissioner-BBMP, Police Commissioners, District Deputy Commissioners, Superintendents of Police, and other Heads of Departments and Authorities.

**(P Ravi Kumar)**
Chief Secretary and Chairman,
State Executive Committee

To:

The Compiler, Karnataka Gazette, Bengaluru